ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ದಳ್ಳಾಳಿಗಳ ಹಾವಳಿ ಕುರಿತು

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1024 (1222) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ದಳ್ಳಾಳಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಆ) ದಳ್ಳಾಳಿಗಳ ಮೂಲಕ ಅರ್ಜಿಗಳನ್ನು ನೀಡಿದರೆ ಮಾತ್ರ ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ಬೇಗ ಕೆಲಸಗಳನ್ನು ಮಾಡಿಕೊಡುತ್ತಿದ್ದು, ಇದು ಭ್ರಷ್ಟಾಚಾರಕ್ಕೆ ಪ್ರೋತ್ಸಾಹ ನೀಡಿದಂತಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ;

(ಇ) ಹಲವಾರು ವರ್ಷಗಳಿಂದ ಈ ಪದ್ಧತಿ ಮುಂದುವರೆಯುತ್ತಿದ್ದರೂ ಸರ್ಕಾರ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಏಕೆ ಕಟ್ಟುನಿಟ್ಟಿನ ಕ್ರಮ ಕೈಗೊಂಡಿಲ್ಲ; ಇನ್ನು ಮುಂದಾದರೂ ಬಿಗಿ ಕ್ರಮ ಕೈಗೊಳ್ಳಲಾಗುವುದೇ?